ಕರ್ನಾಟಕ ಸರ್ಕಾರ
ಹೇಳಿಕೆ ಹಾಳೆ
(ಆರ್ ಪಿ ಸಂಖ್ಯೆ57)
ನಮೂನೆ ಸಂಖ್ಯೆ4

ಸಿ ಆರ್ ಪಿ 67

## ಪ್ರಧಾನ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಸಿಂಧನೂರು

## CC No.739/2014 CW-25 PW-21

| | | |
|---|---|---|
| ಹೆಸರು | : | ಮಹೇಶ |
| ತಂದೆಯ/ಗಂಡನ ಹೆಸರು | : | ಮಹಾಕಾಳೇಪ್ಪ |
| ವಯಸ್ಸು | : | 37 ವರ್ಷ |
| ಉದ್ಯೋಗ | : | ಗುತ್ತಿಗೆ |
| ವಾಸಸ್ಥಳ | : | ಸಿಂಧನೂರು |

ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿದ ದಿನಾಂಕಃ 17-04-2023

ಮುಖ್ಯ ವಿಚಾರಣೆಃ ಸ.ಸ.ಅ. ರವರಿಂದ

ಚಾಸಾ-1 ರವರ ಪರಿಚಯ ಇದೆ. ಚಾಸಾ-26 ರವರ ಪರಿಚಯ ಇರುವುದಿಲ್ಲ.

ದಿಃ 24-08-2013 ರಂದು ನನ್ನನ್ನು ಪೋಲೀಸರು ಸಿಂಧನೂರಿನ ನಟರಾಜ ಕಾಲೋನಿಯಲ್ಲಿರುವ ಶ್ರೀರಾಮ ಚಿಟ್ಸ್ ಸಂಸ್ಥೆಯಲ್ಲಿ ಕರೆದುಕೊಂಡು ಹೋಗಿದ್ದರು. ಪೋಲೀಸರು ನಮ್ಮನ್ನು ಒಳಗೆ ಕರೆದುಕೊಂಡು ಹೋಗಿ ಬೆಳಿಗ್ಗೆ 9-00 ರಿಂದ 10-00 ಗಂಟೆಯವರೆಗೆ ಪಂಚನಾಮೆ ಜರುಗಿಸಿದ್ದಾರೆ. ಅದಕ್ಕೆ ನನ್ನ ಸಹಿ ಪಡೆದುಕೊಂಡಿದ್ದಾರೆ. ಸಾಕ್ಷಿಯು ಘಟನಾ ಸ್ಥಳದ ಪಂಚನಾಮೆಯಲ್ಲಿರುವ ತಮ್ಮ ಸಹಿ ನೋಡಿ ಗುರುತಿಸಿದ್ದರಿಂದ ಅದನ್ನು ನಿಪಿ-61 ಎಂದು, ಸಾಕ್ಷಿ ಸಹಿಯನ್ನು ನಿಪಿ-61 ಎ ಎಂದು ಗುರುತಿಸಲಾಯಿತು. ಪೋಲೀಸರು ಅಲ್ಲಿ ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿಲ್ಲ.

ಪೋಲೀಸರು ಪುನಃ ನನ್ನನ್ನು ಎಲ್ಲಿಯೂ ಕರೆದುಕೊಂಡು ಹೋಗಿಲ್ಲ, ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿಲ್ಲ. ಸಾಕ್ಷಿಯು ಎರಡು ಜಪ್ತಿ ಪಂಚನಾಮೆಗಳಲ್ಲಿರುವ ತಮ್ಮ ಸಹಿಗಳನ್ನು ನೋಡಿ ಗುರುತಿಸಿದ್ದರಿಂದ ಅವುಗಳನ್ನು ನಿಪಿ-62 ಮತ್ತು 63 ಎಂದು, ಸಾಕ್ಷಿ ಸಹಿಗಳನ್ನು ನಿಪಿ-62 ಎ ಮತ್ತು 63 ಎ ಎಂದು ಗುರುತಿಸಲಾಯಿತು. ನಿಪಿ-62 ಮತ್ತು 63 ರಲ್ಲಿ ಏನು ಬರೆದಿದೆ ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ.

(ಮಾನ್ಯ ಸ ಸ ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದರಿಂದ ಅನುಮತಿ ನೀಡಲಾಯಿತು)

ಪಾಟೀ ಸವಾಲು: ಮಾನ್ಯ ಸ ಸ ಅ ರವರಿಂದ

ನಿಪಿ-6 ರ ಸಂದರ್ಭದಲ್ಲಿ ಮು.ಮಾ.-5 ರಿಂದ 23 ನ್ನು ನಮ್ಮ ಸಮಕ್ಷಮ ಅಮಾನತ್ತುಪಡಿಸಿಕೊಂಡರು ಎಂದರೆ ಸರಿ ಅಲ್ಲ. ಅದೇದಿನ ಮಧ್ಯಾಹ್ನ 12-15 ರಿಂ 1-15 ಗಂಟೆಯವರೆಗೆ 1 ನೇ ಆರೋಪಿ ಹಾಜರಪಡಿಸಿದ ರೂ.4,32,000/- ಹಣವನ್ನು ನಮ್ಮ ಸಮಕ್ಷಮ ಅಮಾನತ್ತುಪಡಿಸಿಕೊಂಡು ನಿಪಿ-62 ರಂತೆ ಪಂಚನಾಮೆ ಜರುಗಿಸಿದರು ಎಂದರೆ ಸರಿ ಅಲ್ಲ.

ದಿಃ 30-08-2013 ರಂದು ಮಧ್ಯಾಹ್ನ 2-00 ಗಂಟೆಗೆ 1 ನೇ ಆರೋಪಿ ಹಾಜರಪಡಿಸಿದ ನಗದು ಹಣ ರೂ.17,000/- ಗಳನ್ನು ನಮ್ಮ ಸಮಕ್ಷಮ ಜಪ್ತಿ ಪಡಿಸಿಕೊಂಡರು ಎಂದರೆ ಸರಿ ಅಲ್ಲ. ಈ ಬಗ್ಗೆ ನಿಪಿ-63 ರಂತೆ ಪಂಚನಾಮೆ ಜರುಗಿಸಿದ್ದಾರೆ ಎಂದರೆ ಸರಿ ಅಲ್ಲ. ಈಗ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿ ಅಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ

ಪಂಚನಾಮೆಗೆ ಬರುವಂತೆ ಪೋಲೀಸರು ನನಗೆ ನೋಟೀಸು ನೀಡಿರಲಿಲ್ಲ. ಪೋಲೀಸರು ನಮ್ಮ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿಲ್ಲ ಎಂದರೆ ಸರಿ. ಸಾಕ್ಷಿ ಮುಂದುವರೆದ ಖಾಲಿ ಹಾಳೆಯಲ್ಲಿ ನನ್ನ ಸಹಿ ಪಡೆದುಕೊಂಡಿರುತ್ತಾರೆ ಎಂದು ನುಡಿಯುತ್ತಾರೆ.

ಮರುವಿಚಾರಣೆ ಇಲ್ಲ.

(ನನ್ನ ಉಕ್ತದ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿರುತ್ತಾರೆ)

ಓ ಹೇ ಕೇ ಸರಿ ಇದೆ.

ಪ್ರಧಾನ ಜೆ.ಎಮ್.ಎಫ್.ಸಿ., ಸಿಂಧನೂರು.